## ದೆಹಲಿಯಲ್ಲಿ ಕಾಮನ್‌ವೆಲ್ತ್ ಸಂಸದೀಯ ಸಂಘದ 10ನೇ ಭಾರತ ವಲಯದ ಸಮ್ಮೇಳನ

# ದೇಶದ ಅಭ್ಯುದಯದಲ್ಲಿ ಶಾಸನಸಭೆಗಳ ಪಾತ್ರ ಮಹತ್ತರ: ಸಭಾಪತಿ ಹೊರಟ್ಟಿ ಅಭಿಮತ

**ನವದೆಹಲಿ, ಸೆ.24:** ಜಗತ್ತಿನ ಬಹುದೊಡ್ಡ ಪ್ರಜಾಪ್ರಭುತ್ವ ದೇಶ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಭಾರತದ ಸರ್ವಾಂಗೀಣ ಅಭ್ಯುದಯದಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ತರವಾದುದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು. ರಾಷ್ಟ್ರರಾಜಧಾನಿ ನವದೆಹಲಿಯಲ್ಲಿಯ ನೂತನ ಸಂಸತ್ ಭವನದಲ್ಲಿ ನಡೆದ ಎರಡು ದಿನಗಳ 10ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯ ಸಮ್ಮೇಳನದಲ್ಲಿ ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನ ಸಭೆಗಳ ಪಾತ್ರ ಎಂಬ ವಿಷಯ ಕುರಿತು ಅವರು ವಿಚಾರ ಮಂಡಿಸಿದರು.

ದೇಶದ ಉನ್ನತಿಯಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಭೇದವಿಲ್ಲದ ಅಭಿವೃದ್ಧಿಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು. ಶಾಸನ ಸಭೆಗಳ ಕಾರ್ಯ ಚಟುವಟಿಕೆಗಳು



ಸಮಾಜದ ಮೂಲಭೂತ ಅವಶ್ಯಕತೆಗಳ ಮೇಲೆ ಕೇಂದ್ರೀಕೃತವಾಗಿ ದೇಶದಲ್ಲಿರುವ ಬಡತನ, ಜನರ ಸಂಕಷ್ಟ, ಬವಣೆಗಳ ನಿವಾರಣೆ ನಿಟ್ಟಿನಲ್ಲಿ ಚಿಂತನೆ ನಡೆಸುವ ಚಿಂತಕರ ಚಾವಡಿಗಳಾಗಿ ಪರಿವರ್ತನೆಯಾದಾಗ ಮಾತ್ರ ಪ್ರಜಾಪ್ರಭುತ್ವದ ನೈಜ ಆಶಯಗಳು ಈಡೇರಿಸಲು ಸಾಧ್ಯವಾಗುತ್ತದೆ ಎಂದರು.

ಜಾತಿ, ಧರ್ಮ ಲಿಂಗಗಳ ಬೇಧವಿಲ್ಲದೆ ಜನರ ಮತಗಳಿಂದ ಜನಪ್ರತಿನಿಧಿಯಾಗುವ ಅವಕಾಶ ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ವಿಶ್ವಾಸರ್ಹತೆಯಿಂದ ಔದಾರ್ಯವನ್ನು ಮೆರೆದು ದೇಶದ ಅಭ್ಯುದಯಕ್ಕೆ ಕಟಿಬದ್ಧರಾಗಿ ಸಂಸದೀಯ ಮೌಲ್ಯಗಳ ರಕ್ಷಣೆಗೆ ಮುಂದಾಗಬೇಕಿದೆ. ಇಂದಿನ ಆಧುನಿಕ ದಿನಮಾನಗಳಲ್ಲಿ ಅಭಿವೃದ್ಧಿಯೇ ಪ್ರತಿಯೊಬ್ಬರ ಮೂಲ ಮಂತ್ರವಾಗಬೇಕಿದೆ ಎಂದು ಬಸವರಾಜ ಹೊರಟ್ಟಿ, ನಾಡಿನ ಸುಸ್ಥಿರ ಹಾಗೂ ಸಮಗ್ರ ಬೆಳವಣಿಗೆಯಲ್ಲಿ ಶಾಸನ ಸಭೆಗಳು ಹಾಗೂ ಜನಪ್ರತಿನಿಧಿಗಳ ಪಾತ್ರ ಹಿಂದೆಂದಿಗಿಂತಲೂ ಇಂದು ಹೆಚ್ಚಾಗಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ಆಧುನಿಕ ಸಂವಹನ ತಂತ್ರಾಂಶಗಳನ್ನು ಅಳವಡಿಸಿಕೊಂಡು ಅಭಿವೃದ್ಧಿ ಬಗೆಗೆ ಬದ್ಧತೆ ಹೊಂದಿ ದೇಶದ ಏಳಿಗೆಗೆ ಶ್ರಮಿಸಲು



ಮುಂದಾಗಬೇಕಿದೆ ಎಂದರು.

ಅಭಿವೃದ್ಧಿಯ ನಾಗಾಲೋಟಕ್ಕೆ ತಕ್ಕಂತೆ ಅಗತ್ಯ ವಾತಾವರಣ ಸೃಷ್ಟಿಸಿಕೊಂಡು ಅವಶ್ಯಕವಿರುವ ಕಾನೂನುಗಳನ್ನು ಜಾರಿಗೊಳಿಸುವ ಮೂಲಕ ದೇಶದ ಬೆಳವಣಿಗೆಯ ಸೂಚ್ಯಂಕವನ್ನು ಹೆಚ್ಚಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುವ ಶಾಸನ ಸಭೆಯಲ್ಲಿರುವ ಜನಪ್ರತಿನಿಧಿಗಳು ಅನುದಾನಗಳ ಸೂಕ್ತ ಹಾಗೂ ಪರಿಣಾಮಕಾರಿ ಬಳಕೆಯಿಂದ ಸಮಗ್ರ ಅಭಿವೃದ್ಧಿಯ ಬಗೆಗೆ ಚಿಂತನೆ ನಡೆಸಬೇಕು ಹಾಗೂ ಅಭಿವೃದ್ಧಿ ಪರ ಕಾನೂನುಗಳ ಜಾರಿ ಮತ್ತು ಅನುಷ್ಠಾನಗಳ ಕುರಿತು ಅಧ್ಯಯನ ನಡೆಸಿ ಅವುಗಳ ಕಾರ್ಯರೂಪಕ್ಕೆ ಪರಿಣಾಮಕಾರಿ ಕ್ರಮ ಕೈಗೊಳ್ಳಲು ಆದ್ಯತೆ ನೀಡಬೇಕು. ಶಾಸನ ಸಭೆಗಳು ಆಧುನಿಕ ತಂತ್ರಜ್ಞಾನಕ್ಕೆ ಪೂರಕವಾಗಿ ತಮ್ಮನ್ನು ಸನ್ನದ್ಧಗೊಳಿಸಿಕೊಂಡು ದೇಶದ ಅಗತ್ಯ ಬೇಡಿಕೆಗಳ ಈಡೇರಿಕೆಗೆ ಪಣ ತೊಡಬೇಕಾದ ಅವಶ್ಯಕತೆಯನ್ನು ಸಭಾಪತಿ ಬಸವರಾಜ ಹೊರಟ್ಟಿ ಪ್ರತಿಪಾದಿಸಿದರು.

# ದೇಶದ ಅಭ್ಯುದಯದಲ್ಲಿ ಶಾಸನ ಸಭೆಗಳ ಪಾತ್ರ ಮಹತ್ತರ

## ಕಾಮನ್‌ವೆಲ್ತ್ ಸಂಸದೀಯ ಸಂಘದ 10ನೇ ಭಾರತ ವಲಯದ ಸಮ್ಮೇಳನದಲ್ಲಿ ಬಸವರಾಜ ಹೊರಟ್ಟಿ ಅಭಿಮತ

ನವದೆಹಲಿ: ಜಗತ್ತಿನ ಬಹುದೊಡ್ಡ ಪ್ರಜಾಪ್ರಭುತ್ವ ದೇಶ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಭಾರತದ ಸರ್ವಾಂಗೀಣ ಅಭ್ಯುದಯದಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ತರವಾದುದು ಎಂದು ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿಯ ನೂತನ ಸಂಸತ್ ಭವನದಲ್ಲಿ ನಡೆದ ಎರಡು ದಿನಗಳ 10ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯ ಸಮ್ಮೇಳನದಲ್ಲಿ "ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನ ಸಭೆಗಳ ಪಾತ್ರ"ಎಂಬ ವಿಷಯ ಕುರಿತು ಅವರು ವಿಚಾರ ಮಂಡಿಸಿದರು.

ದೇಶದ ಉನ್ನತಿಯಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಕ್ರಿಯಾಶೀಲತೆ ಹಾಗೂ ಪಕ್ಷಬೇಧವಿಲ್ಲದ ಅಭಿವೃದ್ಧಿ ಪರ ಚಿಂತನೆಯಿಂದ ಮಾತ್ರ ರಾಷ್ಟ್ರದ ಭವಿಷ್ಯ ಉಜ್ವಲವಾಗಬಲ್ಲದು. ಶಾಸನ ಸಭೆಗಳ ಕಾರ್ಯ ಚಟುವಟಿಕೆಗಳು ಸಮಾಜದ ಮೂಲಭೂತ ಅವಶ್ಯಕತೆಗಳ ಮೇಲೆ ಕೇಂದ್ರಿಕೃತವಾಗಿ ದೇಶದಲ್ಲಿರುವ ಬಡತನ,



ಜನರ ಸಂಕಷ್ಟ, ಬವಣೆಗಳ ನಿವಾರಣೆ ನಿಟ್ಟಿನಲ್ಲಿ ಚಿಂತನೆ ನಡೆಸುವ "ಚಿಂತಕರ ಚಾವಡಿ"ಗಳಾಗಿ ಪರಿವರ್ತನೆಯಾದಾಗ ಮಾತ್ರ ಪ್ರಜಾಪ್ರಭುತ್ವದ ನೈಜ ಆಶಯಗಳು ಈಡೇರಿಸಲು ಸಾಧ್ಯವಾಗುತ್ತದೆ ಎಂದರು.

ಜಾತಿ, ಧರ್ಮ ಲಿಂಗಗಳ ಬೇಧವಿಲ್ಲದೆ ಜನರ ಮತಗಳಿಂದ ಜನಪ್ರತಿನಿಧಿಯಾಗುವ ಅವಕಾಶ ಪ್ರಜಾಪ್ರಭುತ್ವ ಕಲ್ಪಿಸಿಕೊಟ್ಟಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ವಿಶ್ವಾಸರ್ಹತೆಯಿಂದ ಔದಾರ್ಯವನ್ನು ಮೆರೆದು ದೇಶದ ಅಭ್ಯುದಯಕ್ಕೆ ಕಟಿಬದ್ಧರಾಗಿ ಸಂಸದೀಯ ಮೌಲ್ಯಗಳ ರಕ್ಷಣೆಗೆ ಮುಂದಾಗಬೇಕಿದೆ. ಇಂದಿನ ಆಧುನಿಕ ದಿನಮಾನಗಳಲ್ಲಿ ಅಭಿವೃದ್ಧಿಯೇ ಪ್ರತಿಯೊಬ್ಬರ ಮೂಲ ಮಂತ್ರವಾಗಬೇಕಿದೆ ಎಂದು ಬಸವರಾಜ ಹೊರಟ್ಟಿ, ನಾಡಿನ ಸುಸ್ಥಿರ ಹಾಗೂ ಸಮಗ್ರ ಬೆಳವಣಿಗೆಯಲ್ಲಿ ಶಾಸನ ಸಭೆಗಳು ಹಾಗೂ ಜನಪ್ರತಿನಿಧಿಗಳ ಪಾತ್ರ ಹಿಂದೆಂದಿಗಿಂತಲೂ ಇಂದು ಹೆಚ್ಚಾಗಿದ್ದು, ಪ್ರತಿಯೊಬ್ಬ ಜನಪ್ರತಿನಿಧಿಯು ಆಧುನಿಕ ಸಂವಹನ ತಂತ್ರಗಾರಿಕೆಗಳನ್ನು ಅಳವಡಿಸಿಕೊಂಡು ಅಭಿವೃದ್ಧಿ ಬಗೆಗೆ ಬದ್ಧತೆ ಹೊಂದಿ ದೇಶದ ಏಳಿಗೆಗೆ ಶ್ರಮಿಸಲು ಮುಂದಾಗಬೇಕಿದೆ ಎಂದರು.

ಅಭಿವೃದ್ಧಿಯ ನಾಗಾಲೋಟಕ್ಕೆ ತಕ್ಕಂತೆ ಅಗತ್ಯ ವಾತಾವರಣ ಸೃಷ್ಟಿಸಿಕೊಂಡು ಅವಶ್ಯಕವಿರುವ ಕಾನೂನುಗಳನ್ನು ಜಾರಿಗೊಳಿಸುವ ಮೂಲಕ ದೇಶದ ಬೆಳವಣಿಗೆಯ ಸೂಚ್ಯಂಕವನ್ನು ಹೆಚ್ಚಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುವ ಶಾಸನ ಸಭೆಯಲ್ಲಿರುವ ಜನಪ್ರತಿನಿಧಿಗಳು ಅನುದಾನಗಳ ಸೂಕ್ತ ಹಾಗೂ ಪರಿಣಾಮಕಾರಿ ಬಳಕೆಯಿಂದ ಸಮಗ್ರ ಅಭಿವೃದ್ಧಿಯ ಬಗೆಗೆ ಚಿಂತನೆ ನಡೆಸಬೇಕು ಹಾಗೂ ಅಭಿವೃದ್ಧಿ ಪರ ಕಾನೂನುಗಳ ಜಾರಿ ಮತ್ತು ಅನುಷ್ಠಾನಗಳ ಕುರಿತು ಅಧ್ಯಯನ ನಡೆಸಿ ಅವುಗಳ ಕಾರ್ಯರೂಪಕ್ಕೆ ಪರಿಣಾಮಕಾರಿ ಕ್ರಮ ಕೈಗೊಳ್ಳಲು ಆದ್ಯತೆ ನೀಡಬೇಕು. ಶಾಸನ ಸಭೆಗಳು ಆಧುನಿಕ ತಂತ್ರಜ್ಞಾನಕ್ಕೆ ಪೂರಕವಾಗಿ ತಮ್ಮನ್ನು ಸನ್ನದ್ಧಗೊಳಿಸಿಕೊಂಡು ದೇಶದ ಅಗತ್ಯ ಬೇಡಿಕೆಗಳ ಈಡೇರಿಕೆಗೆ ಪಣ ತೊಡಬೇಕಾದ ಅವಶ್ಯಕತೆಯನ್ನು ಸಭಾಪತಿ ಬಸವರಾಜ ಹೊರಟ್ಟಿ ಪ್ರತಿಪಾದಿಸಿದರು.

ದೇಶದ ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿಗಾಗಿ ಪ್ರತಿಯೊಬ್ಬ ಜನಪ್ರತಿನಿಧಿಯು ನಿರ್ದಿಷ್ಟ ನೀತಿ ಸಂಹಿತೆಗಳನ್ನು ಅಳವಡಿಸಿಕೊಂಡು ಅವುಗಳನ್ನು ಸಮರ್ಪಕವಾಗಿ ಕಾರ್ಯ ರೂಪಗೊಳಿಸುವಲ್ಲಿ ಸಂಕಲ್ಪ ಬದ್ಧರಾಗುವ ಮೂಲಕ ದೇಶದ ಒಳಿತಿಗೆ ತಮ್ಮನ್ನು ತಾವು ಸಮರ್ಪಿಸಿಕೊಳ್ಳುವಂತೆ ಬಸವರಾಜ ಹೊರಟ್ಟಿ ಕರೆ ನೀಡಿದರು.

ಎರಡು ದಿನಗಳ ಕಾಲ ನಡೆದ ಸಮ್ಮೇಳನದಲ್ಲಿ ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು ಉಪಸಭಾಧ್ಯಕ್ಷರುಗಳು ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿಗಳು ಭಾಗವಹಿಸಿದ್ದರು.

ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರವಂಶಜಿ ವೇದಿಕೆಯಲ್ಲಿದ್ದರು. ಕರ್ನಾಟಕ ವಿಧಾನಪರಿಷತ್ತಿನ ಕಾರ್ಯದರ್ಶಿ ಮಹಾಲಕ್ಷ್ಮೀ, ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್ ಮತ್ತಿತರರು ಸಮ್ಮೇಳನದಲ್ಲಿ ಭಾಗವಹಿಸಿದ್ದರು.






ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿಯ ನೂತನ ಸಂಸತ್ ಭವನದಲ್ಲಿ ನಡೆದ ಎರಡು ದಿನಗಳ ೧೦ನೇ ಕಾಮನ್ ವೆಲ್ತ್ ಸಂಸದೀಯ ಸಂಘದ ಭಾರತ ವಲಯ ಸಮ್ಮೇಳನದಲ್ಲಿ "ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನ ಸಭೆಗಳ ಪಾತ್ರ" ಎಂಬ ವಿಷಯ ಕುರಿತು ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿ ಶ್ರೀ ಬಸವರಾಜ ಹೊರಟ್ಟಿ ವಿಚಾರ ಮಂಡಿಸಿದರು. ಜಗತ್ತಿನ ಬಹುದೊಡ್ಡ ಪ್ರಜಾಪ್ರಭುತ್ವ ದೇಶ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಭಾರತದ ಸರ್ವಾಂಗೀಣ ಅಭ್ಯುದಯದಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ತರವಾದುದು ಎಂದು ಅಭಿಪ್ರಾಯಪಟ್ಟರು.

ದೇಶದ ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿಗಾಗಿ ಪ್ರತಿಯೊಬ್ಬ ಜನಪ್ರತಿನಿಧಿಯು ನಿರ್ದಿಷ್ಟ ನೀತಿ ಸಂಹಿತೆಗಳನ್ನು ಅಳವಡಿಸಿಕೊಂಡು ಅವುಗಳನ್ನು ಸಮರ್ಪಕವಾಗಿ ಕಾರ್ಯ ರೂಪಗೊಳಿಸುವಲ್ಲಿ ಸಂಕಲ್ಪ ಬದ್ಧರಾಗುವ ಮೂಲಕ ದೇಶದ ಒಳಿತಿಗೆ ತಮ್ಮನ್ನು ತಾವು ಸಮರ್ಪಿಸಿಕೊಳ್ಳುವಂತೆ ಬಸವರಾಜ ಹೊರಟ್ಟಿ ಕರೆ ನೀಡಿದರು.

ಕರ್ನಾಟಕ ವಿಧಾನಪರಿಷತ್ತಿನ ಕಾರ್ಯದರ್ಶಿ ಶ್ರೀಮತಿ ಕೆ.ಆರ್ ಮಹಾಲಕ್ಷ್ಮೀ, ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್ ಮತ್ತಿತರರು ಸಮ್ಮೇಳನದಲ್ಲಿ ಭಾಗವಹಿಸಿದ್ದರು